# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 387**

**ಮಾನ್ಯ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)**

**ಉತ್ತರಿಸಬೇಕಾದ ದಿನಾಂಕ : 10.12.2025**

**ಉತ್ತರಿಸಬೇಕಾದ ಸಚಿವರು : ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಒಟ್ಟು ಪಶು ವೈದ್ಯಾಧಿಕಾರಿಗಳ ಹುದ್ದೆ ಎಷ್ಟು: | ರಾಯಚೂರು ಜಿಲ್ಲೆಗೆ ಒಟ್ಟು 93 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿರುತ್ತವೆ. |
| ಆ) | ರಾಯಚೂರು ಜಿಲ್ಲೆಯಲ್ಲಿ ಸಮಯಕ್ಕೆ ಸರಿಯಾಗಿ ಪಶು ವೈದ್ಯಕೀಯ ಸೇವೆಗಳು ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಯಚೂರು ಜಿಲ್ಲೆಯಲ್ಲಿ 31 ಖಾಯಂ ಪಶುವೈದ್ಯರು ಹಾಗೂ 11 ಗುತ್ತಿಗೆ ಪಶುವೈಧ್ಯರುಗಳ ಮುಖಾಂತರ ಸಮರ್ಪಕ ಸೇವೆಯನ್ನು ನೀಡಲಾಗುತ್ತಿದೆ ಇದರೊಂದಿಗೆ 09 ಸಂಚಾರಿ ಪಶುಚಿಕಿತ್ಸಾ ಘಟಕಗಳ ಮೂಲಕ ರೈತರ ಮನೆಬಾಗಿಲಿಗೆ ತುರ್ತು ಸೇವೆಗಳನ್ನು ಒದಗಿಸಲಾಗುತ್ತಿದೆ. |
| ಇ) | ಹಾಗಿದ್ದಲ್ಲಿ, ಮಂಜೂರಾಗಿರುವ ಪಶು ವೈದ್ಯಾಧಿಕಾರಿಗಳ ಹುದ್ದೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು: | ರಾಯಚೂರು ಜಿಲ್ಲೆಯಲ್ಲಿ ಪ್ರಸ್ತುತ 51 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ. |
| ಈ) | ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? | ಇಲಾಖೆಯಲ್ಲಿ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳಿಗೆ ಪಶುವೈದ್ಯರನ್ನು ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. ಸದರಿ ಹುದ್ದೆಗಳ ನೇಮಕಾತಿ ಸಮಯದಲ್ಲಿ ಆಧ್ಯತೆ ಮೇರೆಗೆ ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು. |

**ಪಸಂಮೀ 249 ಸಲೆವಿ 2025**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು